<u>ಕರ್ನಾಟಕ ಸರ್ಕಾರ</u>

**<u>ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ</u>**

ಸಂಖ್ಯೆ: DTE-ADMIOEST(3)/11/2022 831

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 29.10.2022

**ಜ್ಞಾಪನ**

**ವಿಷಯ :** 2022-23ನೇ ಸಾಲಿನಲ್ಲಿ ಆರಂಭಗೊಂಡಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಪತ್ರ ಸಂಖ್ಯೆ: ಇಡಿ 55 ಡಿಟಿಇ 2022, ದಿನಾಂಕ: 04.06.2022.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 61 ಡಿಟಿಇ 2022, ದಿನಾಂಕ: 27.04.2022

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, 2022-23ನೇ ಸಾಲಿನಲ್ಲಿ ಆರಂಭಗೊಂಡಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅರೆಕಾಲಿಕ ಉಪನ್ಯಾಸಕರ ಹುದ್ದೆಗೆ ಈ ಹಿಂದೆ ಸೇವೆ ಸಲ್ಲಿಸಿದ / ಆಸಕ್ತರಿಂದ ಸಂಸ್ಥೆಯ ಹಂತದಲ್ಲಿ ಅರ್ಜಿ ಪಡೆದು, ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ರಚಿಸಿ, ಅರ್ಜಿಗಳನ್ನು ಪರಿಶೀಲಿಸಿ, ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅರೆಕಾಲಿಕ ಉಪನ್ಯಾಸಕರನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಿಸಿಕೊಳ್ಳಲು ಕೆಳಕಂಡ ಷರತ್ತು / ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲಾಗಿದೆ.

**ಷರತ್ತು / ನಿಬಂಧನೆಗಳು:-**

1. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ದ ಕಾರ್ಯಭಾರಕ್ಕೆ ಅನುಗುಣವಾಗಿ ಮತ್ತು ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ(ಮಾರ್ಚ್-2023) ಮಾತ್ರ ಪಡೆಯತಕ್ಕದ್ದು;
2. ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅರೆಕಾಲಿಕ ಉಪನ್ಯಾಸಕರಿಗೆ ಆದ್ಯತೆ ನೀಡುವುದು;
3. ಸಂಸ್ಥೆಗೆ ಖಾಯಂ ಬೋಧಕ ವರ್ಗದವರು ನೇಮಕವಾದ ಸಂದರ್ಭದಲ್ಲಿ ಅರೆಕಾಲಿಕ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡಬೇಕಾದ ಸಂದರ್ಭದಲ್ಲಿ, ಅರೆಕಾಲಿಕ ಉಪನ್ಯಾಸಕರಾಗಿ ಹೆಚ್ಚಿನ ಅವಧಿ ಸೇವೆ ಸಲ್ಲಿಸಿದವರಿಗೆ ಅವಕಾಶ ನೀಡಿ ಕಡಿಮೆ ಅವಧಿಯ ಸೇವೆ ಸಲ್ಲಿಸಿದವರನ್ನು ಕೈಬಿಡುವುದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

29/10/22

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ **(ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಂಡಿರುವ ಬಗ್ಗೆ ಅನುಮೋದನೆಗಾಗಿ ಒಂದು ವಾರದೊಳಗೆ ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ)**

ಪ್ರತಿ:-

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

## ಅನುಬಂಧ

**2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯಾ ವಿವರ**

| ಕ್ರ. ಸಂ. | ಸಂಸ್ಥೆಯ ಹೆಸರು | ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯೆ |
|---|---|---|
| 1. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ | 07 |
| 2. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ನರಗುಂದ | 07 |
| ಒಟ್ಟು | | **14** |

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಲ್ಪಟ್ಟಿದೆ"

ಜಂಟಿ ನಿರ್ದೇಶಕರು(ಆಡಳಿತ), 24/10/22

ತಾಂತ್ರಿಕ ಶಿಕ್ಷಣ ಇಲಾಖೆ,

ಬೆಂಗಳೂರು

# ನಮೂನೆ

**ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಬೋಧಕ ಸಿಬ್ಬಂದಿ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ನೇಮಕ ಮಾಡಿಕೊಳ್ಳಲಾದ ಅರೆಕಾಲಿಕ ಉಪನ್ಯಾಸಕರಿಗೆ ಅನುಮೋದನೆ ನೀಡುವ ಕುರಿತು.**

**ಸಂಸ್ಥೆಯ ಹೆಸರು :**

| ಕ್ರ. ಸಂ. | ವಿಭಾಗ | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪೂರ್ಣಕಾಲಿಕ ಉಪನ್ಯಾಸಕರ ವಿವರ | ಈ ಸಾಲಿಗೆ (ಸೆಮಿಸ್ಟರ್) ಪ್ರವೇಶ ಪಡೆದಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ (ವಿಭಾಗಗವಾರು) | ಎಐಸಿಟಿಇ ನಿಯಮ / ಇಲಾಖಾ ಆದೇಶ ಪ್ರಕಾರ ಪ್ರತಿ ವಿಭಾಗದಲ್ಲಿ ಬೋಧಿಸಬೇಕಾಗಿರುವ ಒಟ್ಟು ಯೂನಿಟ್‌ಗಳು | ಕಾರ್ಯನಿರ್ವಹಿಸುತ್ತಿರುವ ಪೂರ್ಣಕಾಲಿಕ ಉಪನ್ಯಾಸಕರಿಗೆ ಹಂಚಲಾಗಿರುವ ಒಟ್ಟು ಯೂನಿಟ್‌ಗಳು | ಕೊರತೆ ಬೀಳುವ ಒಟ್ಟು ಯೂನಿಟ್‌ಗಳು | ಉಳಿಕೆಯಾಗುವ ಕಾರ್ಯಭಾರಕ್ಕೆ ಅನುಗುಣವಾಗಿ ನೇಮಕಾತಿ ಮಾಡಲಾದ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ | ಪ್ರಸ್ತುತ ನೇಮಕಾತಿ ಮಾಡಿಕೊಳ್ಳಲಾದ ಅರೆಕಾಲಿಕ ಉಪನ್ಯಾಸಕರ ಹೆಸರು | ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ಪಡೆದ ದರ್ಜೆ | ವಯಸ್ಸು | ಅರೆಕಾಲಿಕ ಉಪನ್ಯಾಸಕರಿಗೆ ಹಂಚಲಾದ ಒಟ್ಟು ಯೂನಿಟ್‌ಗಳು | ನೇಮಕಾತಿ ಅವಧಿ | ಷರಾ |
|---|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 |
| | | | | | | | | | | | | | |

ಷರಾ:- ನೇಮಕ ಮಾಡಿಕೊಂಡಿರುವ ಅರೆಕಾಲಿಕ ಉಪನ್ಯಾಸಕರ ವಿದ್ಯಾರ್ಹತೆ ದಾಖಲೆಗಳನ್ನು ಸಂಸ್ಥೆಯಲ್ಲಿಯೇ ಇರಿಸತಕ್ಕದ್ದು.

ಪ್ರಾಂಶುಪಾಲರ ದೃಢೀಕರಣ